## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ : 202
2. ಸದಸ್ಯರ ಹೆಸರು : ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 16.07.2024
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ತುಮಕೂರು ಹಾಗೂ ಚಿತ್ರದುರ್ಗ ಮಧ್ಯೆ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಯೋಜನೆ ಇದೆಯೇ; (ವಿವರ ಒದಗಿಸುವುದು) | ತುಮಕೂರು ಹಾಗೂ ಚಿತ್ರದುರ್ಗ ಮಧ್ಯದಲ್ಲಿ ವಿಮಾನನಿಲ್ದಾಣವನ್ನು ನಿರ್ಮಾಣ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಆ) | ಹಿರಿಯೂರು ಚಿತ್ರದುರ್ಗ ನಡುವೆ ಪ್ರಸ್ತಾವದ ಇಂಡಸ್ಟ್ರೀಯಲ್ ಏರಿಯ ಕೆ.ಐ.ಎ.ಡಿ.ಬಿ ಭೂಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ; | ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕು, ಐಮಂಗಳ ಹೋಬಳಿ, ಮೇಟಿಕುರ್ಕಿ ಮತ್ತು ಕರಿಒಬೇನಹಳ್ಳಿ ಗ್ರಾಮಗಳಲ್ಲಿ ಇಂಡಸ್ಟ್ರಿಯಲ್ ಕಾರಿಡಾರ್ ನಿರ್ಮಾಣ ಯೋಜನೆಗಾಗಿ ಒಟ್ಟು 1156-12.08 ಎಕರೆ ವಿಸ್ತೀರ್ಣದ ಜಮೀನನ್ನು ದಿನಾಂಕ:12.12.2022ರಲ್ಲಿ ಕಲಂ 28(4)ರ ಅಧಿಸೂಚನೆ ಹೊರಡಿಸಿದ್ದು, ಈ ಪೈಕಿ 920-32 ಎಕರೆ ವಿಸ್ತೀರ್ಣದ ಜಮೀನಿಗೆ ಪರಿಹಾರ ಪಾವತಿಸಿದ್ದು, ಉಳಿದ 235-20.08 ಎಕರೆ ಜಮೀನಿಗೆ ಪರಿಹಾರ ಪಾವತಿಸಲು ಬಾಕಿ ಇರುತ್ತದೆ. |
| (ಇ) | ರೈತರಿಂದ ಭೂ ಸ್ವಾಧೀನ ಪಡಿಸಿಕೊಂಡ ಭೂಮಿಯನ್ನು ಕೈಗಾರಿಕೆಗಳಿಗೆ ಹಂಚಿಕೆ ಯಾವಾಗ ಮಾಡಲಾಗುವುದು? (ವಿವರ ಒದಗಿಸುವುದು) | ಕೆಐಎಡಿಬಿ ವತಿಯಿಂದ ಚಿತ್ರದುರ್ಗ ತಾಲ್ಲೂಕು, ಮೇಟಿಕುರ್ಕಿ ಕೈಗಾರಿಕಾ ಪ್ರದೇಶವನ್ನು ಒಟ್ಟು 1156.31 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಿದ್ದು, ಈ ಸಂಬಂಧ ಅಭಿವೃದ್ಧಿ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ.<br><br>ಅನುಮೋದಿತ ನಕ್ಷೆಯಲ್ಲಿ 764.83 ಎಕರೆ ಪ್ರದೇಶವನ್ನು ಕೈಗಾರಿಕಾ ಘಟಕಗಳ ಸ್ಥಾಪನೆಗೆ ಮೀಸಲಿರಿಸಲಾಗಿದ್ದು, ಅಭಿವೃದ್ಧಿ ಕಾಮಗಾರಿಗಳನ್ನು ಮಾರ್ಚ್ 2025 ರೊಳಗಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡ ನಂತರ ಕೈಗಾರಿಕೆಗಳಿಗೆ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಮೂಲಅಇ 110 ರಾಲಅವಿ 2024

**(ಎಂ.ಬಿ. ಪಾಟೀಲ್)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು